**Akashvani: Bangalore**
**Regional Bulletin In Kannada**
**04.12.2025 : 14.30hrs**

ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

ಮುಖ್ಯಾಂಶಗಳು:

**೧. ಪರಪ್ಪನ ಅಗ್ರಹಾರ ಜೈಲಿನಲ್ಲಿ ಮೊಬೈಲ್ ಬಳಕೆ ಪ್ರಕರಣ; ಎನ್ಐಎ ಅಧಿಕಾರಿಗಳಿಂದ ಶಂಕಿತ ಭಯೋತ್ಪಾದಕರ ವಿಚಾರಣೆ**

**೨. ಮಹಿಳಾ ಸರ್ಕಾರಿ ನೌಕರರ ಸಮ್ಮೇಳನ ಉದ್ಘಾಟಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ**

**೩. ಹಸ್ತಪ್ರತಿಗಳ ಸಂರಕ್ಷಣೆ ಮತ್ತು ಡಿಜಿಟಲೀಕರಣಕ್ಕೆ ಸಚಿವ ಎಚ್.ಕೆ.ಪಾಟೀಲ್ ಚಾಲನೆ**

**೪. ಚಾಮರಾಜನಗರ ಮೈಸೂರು ವಲಯದಲ್ಲಿ ಅರಣ್ಯ ಇಲಾಖೆಯಿಂದ ೨೨ ಹುಲಿಗಳ ಸೆರೆ**

**೫. ರೈತರಿಂದ ಭತ್ತ ಖರೀದಿ ಮಾಡುವಂತೆ ಸರ್ಕಾರಕ್ಕೆ ಪ್ರತಿಪಕ್ಷ ನಾಯಕ ಆರ್.ಅಶೋಕ ಆಗ್ರಹ**

**<>><><*><><<>**

ಶಂಕಿತ ಐಸಿಸ್ ಭಯೋತ್ಪಾದಕ ಜೈಲಿನೊಳಗೆ ಮೊಬೈಲ್ ಫೋನ್ ಬಳಿಸಿದ ಪ್ರಕರಣದ ತನಿಖೆಗಾಗಿ ರಾಷ್ಟ್ರೀಯ ತನಿಖಾ ಸಂಸ್ಥೆ, ಬೆಂಗಳೂರು ಕೇಂದ್ರ ಕಾರಾಗೃಹಕ್ಕೆ ಭೇಟಿ ನೀಡಿದೆ. ಬೆಂಗಳೂರಿನ ಪರಪ್ಪನ ಅಗ್ರಹಾರ ಕಾರಾಗೃಹದ ವೈರಲ್ ಆಗಿದ್ದ ವಿಡಿಯೋದಲ್ಲಿ ಐಸಿಸ್ ಭಯೋತ್ಪಾದಕ ಮೊಬೈಲ್ ಬಳಸಿರುವುದು ಕಂಡುಬಂದಿತ್ತು. ಐಸಿಸ್‌ಗೆ ನಿಧಿ ಸಂಗ್ರಹಿಸಿದ ಅರೋಪದ ಹಿನ್ನೆಲೆಯಲ್ಲಿ ಜೈಲಿನಲ್ಲಿರುವ ಶಂಕಿತ ಭಯೋತ್ಪಾದಕ ಜುಹಾಬ್ ಅಮೀದ್ ಶಕೀಲ್ ಮನ್ನಾನನ್ನು ಹಾಗೂ ಆತನ ಸಂಪರ್ಕದಲ್ಲಿದ್ದವರನ್ನು ಎನ್ಐಎ ಅಧಿಕಾರಿಗಳು ವಿಚಾರಣೆ ನಡೆಸುತ್ತಿದ್ದಾರೆ. ಕೇಂದ್ರ ಕಾರಾಗೃಹದ ಸಿಬ್ಬಂದಿಯನ್ನು ಎನ್ಐಎ ವಿಚಾರಣೆ ನಡೆಸುತ್ತಿದೆ ಎಂದು ಐಎಎನ್ಎಸ್ ಸುದ್ದಿ ಸಂಸ್ಥೆ ವರದಿ ಮಾಡಿದೆ.

**<>><><*><><<>**

ವಿಧಾನಸೌಧದಲ್ಲಿ ನಡೆದ ಮಹಿಳಾ ನೌಕರರ ಸಮ್ಮೇಳನಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಇಂದು ಚಾಲನೆ ನೀಡಿದರು. ಸಮಾರಂಭದಲ್ಲಿ ಅಖಿಲ ಕರ್ನಾಟಕ ರಾಜ್ಯ ಸರ್ಕಾರಿ ಮಹಿಳಾ ನೌಕರರ ಸಂಘವು ಮಹಿಳಾ ನೌಕರರಿಗಾಗಿ ಋತುಚಕ್ರ ರಜೆ ಘೋಷಿಸಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರಿಗೆ ಅಭಿನಂದನೆ ಸಲ್ಲಿಸಿತು. ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ, ಸಚಿವರಾದ ಹೆಚ್.ಕೆ. ಪಾಟೀಲ್, ದಿನೇಶ್ ಗುಂಡೂರಾವ್, ಲಕ್ಷ್ಮಿ ಹೆಬ್ಬಾಳ್ಕರ್, ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು.

**<>><><*><><<>**

ರಾಜ್ಯ ಸರ್ಕಾರವು ಸರ್ಕಾರಿ ವಲಯದ ಉದ್ಯೋಗಿಗಳಿಗೂ ತಿಂಗಳಿಗೆ ಒಂದು ದಿನ ವೇತನ ಸಹಿತ ಮುಟ್ಟಿನ ರಜೆಯನ್ನು ವಿಸ್ತರಿಸಿದೆ. ವಿವಿಧ ವಲಯಗಳ ೧೮ ರಿಂದ ೫೨ ವರ್ಷ ವಯಸ್ಸಿನ ಉದ್ಯೋಗಸ್ಥ ಮಹಿಳೆಯರಿಗೆ ತಿಂಗಳಿಗೆ ಒಂದರಂತೆ ವರ್ಷಕ್ಕೆ ೧೨ ಮುಟ್ಟಿನ ರಜೆಯನ್ನು ಕಡ್ಡಾಯಗೊಳಿಸಿ ಸರ್ಕಾರ ಕಳೆದ ತಿಂಗಳು ಆದೇಶ ಹೊರಡಿಸಿತ್ತು. ಡಿಸೆಂಬರ್ ೨ ರಂದು, ರಾಜ್ಯದ ಸರ್ಕಾರಿ ಮಹಿಳಾ ಉದ್ಯೋಗಿಗಳಿಗೂ ತಕ್ಷಣದಿಂದ ಜಾರಿಗೆ ಬರುವಂತೆ ಪ್ರತಿ ತಿಂಗಳು ಒಂದು ದಿನದ ಮುಟ್ಟಿನ ರಜೆ ನೀಡುವಂತೆ ಸರ್ಕಾರ ಆದೇಶಿಸಿದೆ. ೧೮ ರಿಂದ ೫೨ ವರ್ಷದೊಳಗಿನ ಋತುಮತಿಯಾಗುವ ಮಹಿಳಾ ಸರ್ಕಾರಿ ನೌಕರರು ಈ ರಜೆ ಪಡೆಯಲು ಅರ್ಹರಾಗಿದ್ದಾರೆ. ರಜೆ ಪಡೆಯಲು ಯಾವುದೇ ವೈದ್ಯಕೀಯ ಪ್ರಮಾಣಪತ್ರದ ಅಗತ್ಯವಿಲ್ಲ ಎಂದು ಆದೇಶದಲ್ಲಿ ತಿಳಿಸಲಾಗಿದೆ.

**<>><><*><><<>**

ಪುರಾತತ್ವ ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆ, ಪ್ರವಾಸೋದ್ಯಮ ಇಲಾಖೆ, ಮೈಸೂರಿನ ಪ್ರಾಚ್ಯವಿದ್ಯಾ ಸಂಶೋಧನಾಲಯ, ಬೆಂಗಳೂರಿನಲ್ಲಿಂದು ಆಯೋಜಿಸಿದ್ದ "ಹಸ್ತಪ್ರತಿಗಳ ಸಂರಕ್ಷಣೆ ಮತ್ತು ಡಿಜಿಟಲೀಕರಣ" ಕುರಿತ ಒಂದು ದಿನದ ಕಾರ್ಯಗಾರಕ್ಕೆ ಪ್ರವಾಸೋದ್ಯಮ ಸಚಿವ ಹೆಚ್.ಕೆ ಪಾಟೀಲ್ ಚಾಲನೆ ನೀಡಿದರು. 'ಜ್ಞಾನಭಾರತ್ ಮಿಷನ್' ಅಡಿ ಕರ್ನಾಟಕದ ವಿವಿಧ ವಿಶ್ವವಿದ್ಯಾಲಯಗಳಲ್ಲಿ ಸಂಗ್ರಹಿಸಿರುವ ಹಳೆಯ ಕೈ ಬರಹ ಪತ್ರಗಳು, ಹಸ್ತಪ್ರತಿಗಳು, ದಾಖಲೆಗಳನ್ನು ಸಮೀಕ್ಷೆ ಮೂಲಕ ಸಂಗ್ರಹಿಸಿ ಅವುಗಳ ಡಿಜಿಟಲೀಕರಣ ಕುರಿತು ಸಮಾಲೋಚನೆ ನಡೆಸಲಾಯಿತು. ಬಳಿಕ ಹೆಚ್.ಕೆ ಪಾಟೀಲ್, ರಾಜ್ಯ ಸರ್ಕಾರ ಸ್ಮಾರಕಗಳ ರಕ್ಷಣೆಗಾಗಿ ಕಾನೂನು ಜಾರಿಗೊಳಿಸಿದ್ದು, ೫ ಸಾವಿರ ಸ್ಮಾರಕಗಳ ರಕ್ಷಣೆಯ ಗುರಿ ಹೊಂದಲಾಗಿದೆ ಎಂದು ಹೇಳಿದರು. ಸರ್ಕಾರದ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್ ಮಾತನಾಡಿ, ಈಗಾಗಲೇ ಒಂದು ಲಕ್ಷಕ್ಕೂ ಹೆಚ್ಚು ಹಸ್ತಪ್ರತಿಗಳನ್ನು ಸಂಗ್ರಹಿಸಲಾಗಿದ್ದು, ಮುಂದೆ ರಾಜ್ಯದ ಮೂಲೆಮೂಲೆಗಳಿಂದ ಎಲ್ಲ ಹಸ್ತಪ್ರತಿಗಳನ್ನು ರಕ್ಷಿಸಿ ಡಿಜಿಟಲೀಕರಣ ಮಾಡಲಾಗುವುದು ಎಂದು ತಿಳಿಸಿದರು.

<><><*><><<>

ಮೈಸೂರು ಜಿಲ್ಲೆಯಲ್ಲಿ ಕಳೆದ ಎರಡು ತಿಂಗಳಿಂದ ಹೆಚ್ಚಾಗಿದ್ದ ಹುಲಿ ದಾಳಿಗಳ ಪ್ರಕರಣಕ್ಕೆ ಅರಣ್ಯ ಇಲಾಖೆಯ ಕಾರ್ಯಾಚರಣೆ ಅಂತ್ಯ ಹಾಡಿದೆ. ಜಿಲ್ಲೆಯ ವಿವಿಧ ಭಾಗಗಳಲ್ಲಿ ಕಳೆದ ೪೦ ರಿಂದ ೪೨ ದಿನಗಳ ಅವಧಿಯಲ್ಲಿ ಒಟ್ಟು ೧೨ ಮರಿಗಳು ಸೇರಿದಂತೆ ಒಟ್ಟು ೨೨ ಹುಲಿಗಳನ್ನು ಸೆರೆಹಿಡಿಯಲಾಗಿದೆ. ಈ ಬಗ್ಗೆ ಮಾಹಿತಿ ನೀಡಿರುವ ಡಿಸಿಎಫ್ ಪುರುಷೋತ್ತಮ್, ಪ್ರತಿ ವರ್ಷ ಸೆಪ್ಟೆಂಬರ್‌ನಿಂದ ಡಿಸೆಂಬರ್ ವರೆಗೆ ಹುಲಿಗಳು ಹೆಚ್ಚು ಕಾಣಿಸಿಕೊಳ್ಳುವ ಸಮಯವಾಗಿದೆ. ಗರ್ಭಿಣಿ ಹುಲಿಗಳು ಹಾಗೂ ಮರಿಗಳೊಂದಿಗೆ ಇರುವ ತಾಯಿಹುಲಿಗಳು ಸುರಕ್ಷಿತ ಸ್ಥಳ ಹುಡುಕುವುದು ಸಾಮಾನ್ಯ. ಆದರೆ ಜನರು ಅಥವಾ ಜಾನುವಾರುಗಳು ಕಣ್ಮುಂದೆ ಬಂದರೆ ದಾಳಿ ಮಾಡುವ ಸಾಧ್ಯತೆ ಹೆಚ್ಚಾಗುತ್ತದೆ ಎಂದು ಹೇಳಿದ್ದಾರೆ. ಅರಣ್ಯ ಇಲಾಖೆ ಸಿಬ್ಬಂದಿ ಅತ್ಯಾಧುನಿಕ ತಂತ್ರಜ್ಞಾನ, ಥರ್ಮಲ್ ಕ್ಯಾಮೆರಾ, ಡ್ರೋನ್‌ಗಳನ್ನು ಬಳಸಿ ಹಗಲು-ರಾತ್ರಿ ಸರಗೂರು ತಾಲೂಕು, ಹೆಡಿಯಾಲ ವಲಯ, ಹುಣಸೂರು ಹಾಗೂ ಹೆಚ್.ಡಿ.ಕೋಟೆ ಭಾಗದಲ್ಲಿ ಹುಡುಕಾಟ ನಡೆಸಿ ಹುಲಿಗಳನ್ನು ಸೆರೆ ಹಿಡಿಯಲಾಯಿತು, ಸದ್ಯ ಎಲ್ಲ ಹುಲಿಗಳನ್ನೂ ಮೈಸೂರಿನ ಕೂರ್ಗಳ್ಳಿ ಪುನರ್ವಸತಿ ಕೇಂದ್ರದಲ್ಲಿ ಇರಿಸಲಾಗಿದೆ.

<><><*><><<>

ಈ ಬಾರಿ ಉತ್ತಮ ಮಳೆಯಿಂದಾಗಿ ಮಂಡ್ಯ-ಮೈಸೂರು ಭಾಗದಲ್ಲಿ ಭತ್ತದ ಬೆಳೆಯಲ್ಲಿ ಉತ್ತಮ ಫಸಲು ಬಂದಿದೆ. ಆದರೆ, ಸರ್ಕಾರ ಭತ್ತ ಖರೀದಿ ಕೇಂದ್ರಗಳನ್ನು ಆರಂಭಿಸದೆ ಹಾಗೂ ಸೂಕ್ತ ಬೆಲೆ ನೀಡಿದೆ, ರೈತರನ್ನು ಸಂಕಷ್ಟಕ್ಕೆ ತಳ್ಳಿದೆ ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ ಆರೋಪಿಸಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿರುವ ಅವರು, ಕೇಂದ್ರ ಸರ್ಕಾರ ಕ್ವಿಂಟಲ್ ಭತ್ತಕ್ಕೆ ೨ ಸಾವಿರದ ೩೬೨ ರೂಪಾಯಿ ಬೆಂಬಲ ಬೆಲೆ ಘೋಷಿಸಿದೆ. ಕೇರಳ, ಒಡಿಸ್ಸಾ ಹಾಗೂ ತೆಲಂಗಾಣ ರಾಜ್ಯಗಳಲ್ಲಿ ನೀಡುತ್ತಿರುವಂತೆ ರಾಜ್ಯ ಸರ್ಕಾರ ಕ್ವಿಂಟಾಲ್ ಭತ್ತಕ್ಕೆ ೫೦೦ ರೂಪಾಯಿ ಪ್ರೋತ್ಸಾಹ ಧನವಾಗಿ ಬೆಂಬಲ ಬೆಲೆ ಘೋಷಣೆ ಮಾಡಿ ಖರೀದಿ ಕೇಂದ್ರಗಳ ಮೂಲಕ ಭತ್ತ ಖರೀದಿ ಮಾಡುವಂತೆ ಒತ್ತಾಯಿಸಿದ್ದಾರೆ. ಪಂಜಾಬ್ ಇನ್ನಿತರ ರಾಜ್ಯಗಳ ಮಾದರಿಯಲ್ಲಿ ಭತ್ತ ಖರೀದಿ ಕೇಂದ್ರಗಳಲ್ಲೇ ಒಣಗಿಸುವ ಯಂತ್ರ ಅಳವಡಿಸಿ ಖರೀದಿ ಪ್ರಕ್ರಿಯೆ ತ್ವರಿತಗೊಳಿಸುವಂತೆ ಆಗ್ರಹಿಸಿದ್ದಾರೆ.

<><><*><><<>

ಕೊಡಗು ಜಿಲ್ಲೆಯಲ್ಲಿಂದು ಸುಗ್ಗಿ ಹಬ್ಬವಾದ ಹುತ್ತರಿಯ ಸಂಭ್ರಮ ಮನೆ ಮಾಡಿದೆ. ಇಂದು ರಾತ್ರಿ ಕೊಡಗಿನಲ್ಲಿ ರೈತರು ಗದ್ದೆಯಲ್ಲಿ ಬೆಳೆದ ಭತ್ತದ ಪೈರಿಗೆ ಪೂಜೆ ಸಲ್ಲಿಸಿ ಮನೆಗೆ ತರುವ ಹಬ್ಬವಾಗಿ ಹುತ್ತರಿಯನ್ನು ಆಚರಿಸಲಾಗುತ್ತದೆ. ಬೆಳದಿಂಗಳ ಬೆಳಕಿನಲ್ಲಿ ಸಂಭ್ರಮದಿಂದ ನಡೆಯುವ ಹುತ್ತರಿ ಆಚರಣೆಗೆ ಕೊಡಗಿನ ಮನೆಮನೆಗಳಲ್ಲಿಯೂ ಬಿರುಸಿನ ತಯಾರಿ ನಡೆಯುತ್ತಿದೆ. ಇಂದು ರಾತ್ರಿ ೯ ಗಂಟೆ ೪೦ ನಿಮಿಷಕ್ಕೆ ಕದಿರು ತೆಗೆದು ೧೦ ಗಂಟೆ ೪೦ ನಿಮಿಷಕ್ಕೆ ತಮ್ಮ ಮನೆಯಲ್ಲಿ ಕದಿರಿಗೆ ಪೂಜೆ ಸಲ್ಲಿಸಿ ಸಸ್ಯಾಹಾರ ಭೋಜನ ಸ್ವೀಕರಿಸಲಾಗುತ್ತದೆ. ಪಟಾಕಿ ಸಿಡಿಸಿ ಹಬ್ಬದ ಸಂಭ್ರಮಕ್ಕೆ ಮತ್ತಷ್ಟು ರಂಗು ತಂದುಕೊಳ್ಳಲು ಕೊಡಗಿನ ಜನರು ಸಿದ್ಧರಾಗಿದ್ದಾರೆ.

<><><*><><<>

ರಾಜಸ್ತಾನದಲ್ಲಿ ನಡೆಯುತ್ತಿರುವ ಖೇಲೋ ಇಂಡಿಯಾ ವಿಶ್ವವಿದ್ಯಾಲಯ ಕ್ರೀಡಾಕೂಟದಲ್ಲಿ ಡಾ. ಮನಮೋಹನ್ ಸಿಂಗ್ ಬೆಂಗಳೂರು ನಗರ ವಿಶ್ವವಿದ್ಯಾನಿಲಯದ ತಂಡ ಹಾಕಿ ಪಂದ್ಯಾವಳಿಯಲ್ಲಿ ಕಂಚಿನ ಪದಕ ಗಳಿಸಿದೆ.
ಜೈಪುರದಲ್ಲಿ ನಿನ್ನೆ ನಡೆದ ಪಂದ್ಯದಲ್ಲಿ ಪೂರ್ವಾಂಚಲದ ವೀರಬಹದ್ದೂರ್ ಸಿಂಗ್ ಯೂನಿವರ್ಸಿಟಿ ವಿರುದ್ಧ ಬಿಸಿಯು ತಂಡ ೩-೦ ಗೋಲುಗಳ ಅಂತರದಲ್ಲಿ ಜಯಗಳಿಸಿ ಮೂರನೇ ಸ್ಥಾನ ಪಡೆದಿದೆ.

**<>><><*><><<>**

ಇಂದು ನೌಕಾದಳ ದಿನ. ೧೯೭೧ ರ ಇಂಡೋ-ಪಾಕ್ ಯುದ್ಧದ ಸಮಯದಲ್ಲಿ ಕರಾಚಿಯ ಮೇಲೆ ಭಾರತೀಯ ನೌಕಾಪಡೆಯ ಕ್ಷಿಪಣಿ ಹಡಗುಗಳು ನಡೆಸಿದ ಧೈರ್ಯಶಾಲಿ ದಾಳಿಯ ಸ್ಮರಣಾರ್ಥವಾಗಿ ಪ್ರತಿ ವರ್ಷ ಈ ದಿನವನ್ನು ನೌಕಾಪಡೆಯ ದಿನವನ್ನಾಗಿ ಆಚರಿಸಲಾಗುತ್ತದೆ. ಕಾರವಾರ ನೌಕಾನೆಲೆಯು ಭಾರತೀಯ ನೌಕಾಪಡೆಯ ಪ್ರಧಾನ ನೌಕಾ ನೆಲೆಗಳಲ್ಲಿ ಒಂದಾಗಿದೆ. ನೇವಿ ಡೇ ಅಂಗವಾಗಿ ಉತ್ತರಕನ್ನಡ ಜಿಲ್ಲೆಯ ಕಾರವಾರದ ಅರ್ಗಾ ಬಳಿಯಿರುವ ನೌಕಾನೆಲೆಯಲ್ಲಿ ಇಂದು ಸಂಜೆ ನೌಕಾಪಡೆಯ ನೌಕಾ ಬ್ಯಾಂಡ್‌ನಿಂದ ಆಕರ್ಷಕ ‘ಬೀಟಿಂಗ್ ರಿಟ್ರೀಟ್ ಹಾಗೂ ಎಟ್ ಹೋಮ್ ಸಮಾರಂಭ ನಡೆಯಲಿದೆ. ಮುಖ್ಯ ಅತಿಥಿಗಳಾಗಿ ರಾಜ್ಯಪಾಲ ಥಾವರಚಂದ್ ಗೆಹ್ಲೋಟ್ ಭಾಗವಹಿಸಲಿದ್ದಾರೆ ಎಂದು ಭಾರತೀಯ ನೌಕಾಪಡೆ ಪ್ರಕಟಣೆಯಲ್ಲಿ ತಿಳಿಸಿದೆ.

**<>><><*><><<>**

ಕರ್ನಾಟಕ ಸಾಹಿತ್ಯ ಅಕಾಡೆಮಿಯ ಪ್ರತಿಷ್ಠಿತ ಪ್ರಶಸ್ತಿ ಪ್ರದಾನ ಸಮಾರಂಭವು ನಾಳೆ ಗುಬ್ಬಿಯ ಡಾ.ಗುಬ್ಬಿ ವೀರಣ್ಣ ರಂಗಮಂದಿರದಲ್ಲಿ ನಡೆಯಲಿದೆ ಎಂದು ಕರ್ನಾಟಕ ಸಾಹಿತ್ಯ ಅಕಾಡೆಮಿ ಅಧ್ಯಕ್ಷ ಎಲ್. ಎನ್. ಮುಕುಂದರಾಜ್ ತಿಳಿಸಿದ್ದಾರೆ. ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ೨೦೨೪ನೇ ಸಾಲಿನ ಗೌರವ ಪ್ರಶಸ್ತಿ, ಸಾಹಿತ್ಯಶ್ರೀ ಪ್ರಶಸ್ತಿ ಹಾಗೂ ೨೦೨೩ನೇ ಸಾಲಿನ ಪುಸ್ತಕ ಬಹುಮಾನ ಮತ್ತು ದತ್ತಿ ಬಹುಮಾನ ಪ್ರದಾನ ನಡೆಯಲಿದೆ. ಹಿಂದುಳಿದ ವರ್ಗಗಳ ಕಲ್ಯಾಣ ಮತ್ತು ಕನ್ನಡ ಮತ್ತು ಸಂಸ್ಕೃತಿ ಇಲಾಖಾ ಸಚಿವ ಶಿವರಾಜ್ ಎಸ್.ತಂಗಡಗಿ ಉದ್ಘಾಟನೆ ನೆರವೇರಿಸಲಿದ್ದಾರೆ.

**<>><>< ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು ><><<>**

**<>><>< ನಮ್ಮ ಮುಂದಿನ ವಾರ್ತಾ ಪ್ರಸಾರ ಸಂಜೆ ೬.೪೦ ಕ್ಕೆ ><><<>**